RNU AIR DHARWAD

NOVEMBER 03, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಬೆಂಗಳೂರು, ನ್ಯಾ 'ನಲ್ ಗ್ಯಾಲರಿ ಆಫ್ ಮಾಡರ್ನ್ ಆರ್ಟ್ ನಲ್ಲಿ ಆಯೋಜಿತ, 'ಪಂಪಾ – ಕರ್ನಾಟಕದ ಜವಳಿ ವೈವಿಧ್ಯ' ಪ್ರದರ್ಶನವನ್ನು, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹಾಗೂ ಸಾರಿಗೆ ಖಾತೆ ಸಚಿವ ಭೈರತಿ ಸುರೇಶ ವೀಕ್ಷಿಸಿದರು. ಈ ಕುರಿತು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ ಅವರು, ತಲೆಮಾರುಗಳಿಂದ ಬೆಳೆದುಬಂದ ರಾಜ್ಯದ ಶ್ರೀಮಂತ ಜವಳಿ ಪರಂಪರೆ, ಸಾಂಪ್ರದಾಯಿಕ ನೇಯ್ಗೆ ವಿಧಾನಗಳು ಹಾಗೂ ಅದ್ಭುತ ಕರಕುಶಲತೆಯನ್ನು ಈ ಪ್ರದರ್ಶನ ಅನಾವರಣಗೊಳಿಸುತ್ತಿದೆ. ಕರ್ನಾಟಕದ ನೇಕಾರರು ಮತ್ತು ಕುಶಲಕರ್ಮಿಗಳ ಕಲಾತ್ಮಕ ಪರಂಪರೆಯನ್ನು ಸಂಭ್ರಮಿಸುತ್ತದೆ ಎಂದು ತಿಳಿಸಿದ್ದಾರೆ.

<><><>

ಇಂದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿಗೆ, ಭೇಟಿ ನೀಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಧರ್ಮಪುರದಲ್ಲಿ ನೂತನ ಕೆಎಸ್ಆರ್‌ಟಿಸಿ ಬಸ್ ನಿಲ್ದಾಣ ಸೇರಿದಂತೆ, ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಮಧ್ಯಾಹ್ನ 12.30 ಕ್ಕೆ, ದಿಂಡಾವರದಲ್ಲಿ, 17 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡಲಿದ್ದಾರೆ.

<><><>

ಕರ್ನಾಟಕ ಹಾಲು ಒಕ್ಕೂಟ–ಕೆಎಂಎಫ್ ಪದಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದ್ದು, ಗ್ರಾಹಕರ ಹಿತದೃಷ್ಟಿಯಿಂದ ಮೊಸರಿನ ಬೆಲೆಯನ್ನು ಕಡಿಮೆ ಮಾಡುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಿಳಿಸಿದ್ದಾರೆ. ಹೈನುಗಾರರ ಹಿತಾಸಕ್ತಿ ಕಾಪಾಡುವ ಜೊತೆ, ಗ್ರಾಹಕರಿಗೂ ಹೊರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಅವರು ತಿಳಿಸಿದ್ದಾರೆ.

<><><>

ರಾಜ್ಯ ಸರ್ಕಾರದ, ಹಾಲಿನ ದರ ಏರಿಕೆ ಕ್ರಮವನ್ನು ಖಂಡಿಸಿ, ಹುಬ್ಬಳ್ಳಿ–ಧಾರವಾಡ ಮಹಾನಗರ, ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಹುಬ್ಬಳ್ಳಿಯಲ್ಲಿ ಪ್ರತಿಭಟನೆ ನಡೆಸಲಾಯಿತು.

<><><>

ವಿಜಯನಗರ ಜಿಲ್ಲೆ, ಹೂವಿನಹಡಗಲಿ ತಾಲೂಕು, ಇಟ್ಟಿಗಿ ಗ್ರಾಮದ ಮೂರ್ತಿ ಶಿಲ್ಪಿ ಕಲಾವಿದ ಜಿ. ಬಿ ಹಂಸಾನಂದ ಆಚಾರ್ಯ, ಬೆಂಗಳೂರಿನಲ್ಲಿ ಆಯೋಜಿತ 71 ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ, ಮುಖ್ಯಮಂತ್ರಿ ಅವರಿಂದ 'ಕರ್ನಾಟಕ ರಾಜ್ಯೋತ್ಸವ', ಪ್ರಶಸ್ತಿ ಸ್ವೀಕರಿಸಿದರು. 70 ವ ರ್ಷಗಳಿಂದ ಕಾ ್ಯ, ಲೋಹ ಮತ್ತು ಕಲ್ಲಿನ ಶಿಲ್ಪಗಳು ಹಾಗೂ ಮೂರ್ತಿಗಳನ್ನು ನಿರ್ಮಿಸುತ್ತಿರುವ ಹಂಸಾನಂದ ಆಚಾರ್ಯ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಹಂಸಾನಂದ ಆಚಾರ್ಯ ಧ್ವನಿ– 37 ಸೆಕೆಂದುಗಳು

<><><>

ವಿಜಯನಗರ ಜಿಲ್ಲೆ, ಹೊಸಪೇಟೆಯಲ್ಲಿ, 10 ಕೋಟಿ 97 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ, 36 ನೂತನ ಪೊಲೀಸ್ ವಸತಿ ಗೃಹಗಳ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ನೆರವೇರಿಸಿದರು.

<><><>

ಚಿಕ್ಕಬಳ್ಳಾಪುರ ತಾಲ್ಲೂಕು ಮುದ್ದೇನಹಳ್ಳಿ ಬಳಿ ಇರುವ, ವಿಶ್ವೇಶ್ವರಾಯ ಉನ್ನತ ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿರುವ, ಉನ್ನತ ಶಿಕ್ಷಣ ಖಾತೆ ಸಚಿವ ಬಸವರಾಜ ರಾಯರೆಡ್ಡಿ ಇಂದು ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಬಳಿಕ ಸಂಸ್ಥೆಯ ಪರಿವೀಕ್ಷಣೆ ನಡೆಸಲಿದ್ದಾರೆ.

<><><>

ವಿಶೇಷಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದಡಿ ಡಾಕ್ಟರ ಎಸ್.ವಿ ವೆಂಕಟರಮಣ ಸ್ವಾಮಿ, ಅವರನ್ನು ರಾಜ್ಯ ಆಯುಕ್ತರನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

<><><>

ಸೆನೆಗಲ್ ನ ಡಕಾರದಲ್ಲಿ ಆಯೋಜಿತ, 2026 ನೇ ಯೂತ್ ಒಲಿಂಪಿಕ್ಸ್ ನ, ಮಹಿಳೆಯರ ಈಜು ಸ್ಪರ್ಧೆಯಲ್ಲಿ, ಭಾರತವನ್ನು ಪ್ರತಿನಿಧಿಸಿರುವ, ಕನ್ನಡತಿ ಧಿನಿಧಿ ದೇಸಿಂಗು, 100 ಮೀಟರ್ ಫ್ರೀ ಸ್ಟೈಲ್ ಈಜು ಸ್ಪರ್ಧೆಯಲ್ಲಿ ಕಂಚಿನ ಪದಕ ಜಯಿಸಿದರು. 16 ವರ್ಷದ ಧಿನಿಧಿ, 56 ದಶಾಂಶ 2, 7 ಸೆಕೆಂದುಗಳನ್ನು ಗುರಿ ತಲುಪಿ ಈ ಸಾಧನೆ ಮಾಡಿದರು.

<><><>

ಹಾಸನದ, ಶ್ರೀ ಹಾಸನಾಂಬ ದೇವಿ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮಿ ದೇವರ ಸಾರ್ವಜನಿಕ ದರ್ಶನ ವ್ಯವಸ್ಥೆ ಇಂದು ಐದನೇ ದಿನಕ್ಕೆ ಕಾಲಿಟ್ಟಿದೆ. ಕೇಂದ್ರ ರೈಲ್ವೆ ಖಾತೆ, ರಾಜ್ಯ ಸಚಿವ ವಿ ಸೋಮಣ್ಣ, ಗ್ರೇಟರ ಬೆಂಗಳೂರು ಅಭಿವೃದ್ಧಿ ಖಾತೆ ಸಚಿವ ಕೃ ್ಣ ಭೈರೇಗೌಡ, ಮಾಜಿ ಸಚಿವ ಈಶ್ವರಪ್ಪ, ಸೇರಿದಂತೆ ಹಲವು ಜನಪ್ರತಿನಿಧಿಗಳು, ಶ್ರೀ ಹಾಸನಾಂಬ ದೇವರ ದರ್ಶನ ಪಡೆದರು.

<><><>

ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ನಗರಸಭೆ ಕಚೇರಿ ಮೇಲೆ, ದಾಳಿ ನಡೆಸಿದ ಜಿಲ್ಲಾ ಲೋಕಾಯುಕ್ತ ಪೊಲೀಸರು, ಲಂಚ ಪಡೆಯುತ್ತಿದ್ದ ದ್ವಿತೀಯ ದರ್ಜೆ ಸಹಾಯಕ ನಾಗರಾಜ್ ಹಾಗೂ ನಗರಸಭೆಯ ಮಾಜಿ ಸದಸ್ಯ ಮೌಲಾ ಎಂಬವರನ್ನು ಬಂಧಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>